RNU AIR DHARWAD

JULY 24 2024

# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಕೇಂದ್ರ ಬಜೆಟ್ ಮಂಡನೆ; ನೈಸರ್ಗಿಕ ಕೃಷಿ, ತೋಟಗಾರಿಕಾ ಉತ್ಪನ್ನಗಳ ಹೆಚ್ಚಳಕ್ಕೆ ಒತ್ತು – ಸಚಿವೆ ನಿರ್ಮಲಾ ಸೀತಾರಾಮನ್.
- ಕೇಂದ್ರ ಬಜೆಟ್ ನಿರಾಶಾದಾಯಕ – ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ.
- ರೈತರ ಅಭಿವೃದ್ಧಿಗೆ ಸರ್ಕಾರ ಬದ್ಧ – ಸಚಿವ ಎಸ್.ಎಸ್. ಮಲ್ಲಿಕಾರ್ಜುನ್.
- ಅನಧಿಕೃತ ಬಡಾವಣೆ ತೆರವುಗೊಳಿಸಲು ಅಗತ್ಯ ಕ್ರಮ – ಸಚಿವ ಬಿ.ಎಸ್. ಸುರೇಶ್

ಈಗ ವಾರ್ತೆಗಳ ವಿವರ

ಅಮೃತ ಕಾಲದ ಮೊದಲ ಪೂರ್ಣ ಪ್ರಮಾಣದ 2024–25ನೇ ಸಾಲಿನ ಕೇಂದ್ರ ಬಜೆಟ್‌ನ್ನು ಹಣಕಾಸು ಖಾತೆ ಸಚಿವೆ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿ  ಮಂಡಿಸಿದರು. ಇದು ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಎನ್.ಡಿ.ಎ ಸರ್ಕಾರದ ಮೂರನೇ ಅವಧಿಯ ಮೊದಲ ಬಜೆಟ್ ಆಗಿದೆ. ನಿರ್ಮಲಾ ಸೀತಾರಾಮನ್ ಅವರು ಸತತ 7ನೇ ಬಾರಿಗೆ ದಾಖಲೆಯ ಬಜೆಟ್ ಮಂಡಿಸಿರುವುದು ವಿಶೇ ‘ವಾಗಿದೆ. ಬಜೆಟ್‌ನಲ್ಲಿ ಮುಂದಿನ ಪೀಳಿಗೆಯ ಸುಧಾರಣೆಗಳಿಗೆ ಆದ್ಯತೆ ನೀಡಲಾಗಿದೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ನಗರ ಮತ್ತು ಗ್ರಾಮೀಣ ಭಾಗದಲ್ಲಿ ಭೂ ಸಂಬಂಧಿತ ಕ್ಷೇತ್ರದಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಅಳವಡಿಕೆಗೆ ಒತ್ತು ನೀಡಲಾಗಿದೆ. ಎಲ್ಲ ಭೂ ದಾಖಲೆಗಳಿಗೆ ಆಧಾರ್ ಜೋಡಣೆ ಮಾಡಲಾಗುವುದು. ಕೃಷಿ ಸಂಶೋಧನೆಯಲ್ಲಿ ಮಹತ್ವದ ಪರಿವರ್ತನೆ ತರುವ, ರಾಷ್ಟ್ರೀಯ ಸಹಕಾರ ನೀತಿ ಜಾರಿ, ನೈಸರ್ಗಿಕ ಕೃಷಿ, ತೋಟಗಾರಿಕಾ ಉತ್ಪನ್ನಗಳ ಹೆಚ್ಚಳಕ್ಕೆ ಒತ್ತು, ರಫ್ತು ಚಟುವಟಿಕೆ ಹೆಚ್ಚಳ, ಸಾರ್ವಜನಿಕ ಡಿಜಿಟಲ್ ಮೂಲಸೌಕರ್ಯಕ್ಕೆ ಆದ್ಯತೆ ಕಲ್ಪಿಸುವುದಾಗಿ ತಿಳಿಸಿದ್ದಾರೆ. ಸಾಮಾಜಿಕ ನ್ಯಾಯ, ಮೂಲಸೌಕರ್ಯ ಅಭಿವೃದ್ಧಿ, ಶಿಕ್ಷಣ, ತೆರಿಗೆ ಸರಳೀಕರಣ, ಬಂಡವಾಳ ವೆಚ್ಚಕ್ಕೆ ಆದ್ಯತೆ ನೀಡುವ ಅಂಶಗಳಿಗೆ ಬಜೆಟ್‌ನಲ್ಲಿ ಒತ್ತು ಕೊಡಲಾಗಿದೆ. ಬಜೆಟ್‌ನಲ್ಲಿ ಮೂಲ ಸೌಕರ್ಯಾಭಿವೃದ್ಧಿಗೆ ಗಮನ ಹರಿಸಿದ್ದು, 11 ಲಕ್ಷ ಕೋಟಿ ರೂಪಾಯಿಗೂ ಅಧಿಕ ಮೊತ್ತವನ್ನು ಈ ವಲಯದಲ್ಲಿ ವೆಚ್ಚ ಮಾಡಲಾಗುತ್ತಿದೆ ಎಂದು ತಿಳಿಸಿದರು.

*******

ಸಂಸತ್ತಿನಲ್ಲಿ ಮಂಡಿಸಲಾದ 2024–25ನೇ ಸಾಲಿನ ಕೇಂದ್ರ ಬಜೆಟ್, ಸಮಾಜದ ಪ್ರತಿಯೊಂದು ವರ್ಗಕ್ಕೂ ಶಕ್ತಿಯನ್ನು ತುಂಬಲಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿಕ್ರಿಯಿಸಿದ್ದಾರೆ. ಕಳೆದ 10 ವ ‘ಗಳಲ್ಲಿ 25 ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ. ಸಣ್ಣ ಉದ್ಯಮಿಗಳು, ಎಂ.ಎಸ್.ಎಂ.ಇ ಗಳಿಗೆ ಈ ಬಜೆಟ್ ನೆರವಾಗಲಿದೆ ಎಂದು ಹೇಳಿದ್ದಾರೆ. ಕೇಂದ್ರ ಬಜೆಟ್ ನಿರಾಶಾದಾಯಕವಾಗಿದೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರತಿಕ್ರಿಯಿಸಿದ್ದಾರೆ. ಕೃಷಿ ಬೆಳೆಗಳಿಗೆ ಕನಿ ್ಠ ಬೆಂಬಲ ಬೆಲೆ ಮತ್ತು ಕ್ರಿಮಿನಾಶಕಗಳಿಗೆ ಸಬ್ಸಿಡಿಯನ್ನು ಬಜೆಟ್‌ನಲ್ಲಿ ನಿರೀಕ್ಷಿಸಲಾಗಿತ್ತು. ಆದರೆ ಈ ಬಗ್ಗೆ ಪ್ರಸ್ತಾಪವಿಲ್ಲ. ರೈಲ್ವೆಯಲ್ಲಿ ಅನೇಕ ಅಪಘಾತಗಳು ಸಂಭವಿಸುತ್ತಿದ್ದರೂ ರೈಲು ಹಳಿಗಳು ಇಲ್ಲವೆ ಪ್ರಯಾಣಿಕರ ಸುರಕ್ಷತೆ ಸುಧಾರಣೆಗೆ ಒತ್ತು ನೀಡಿಲ್ಲ ಎಂದರು. ಭವ್ಯ ಭಾರತದ ದೃಷ್ಟಿಕೋನದಿಂದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಬಜೆಟ್ ವಿಕಸಿತ ಭಾರತಕ್ಕೆ ಕಾಯಕಲ್ಪ ಕೊಡುವ ಬಜೆಟ್ ಆಗಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದ್ದಾರೆ.

ಕೇಂದ್ರ ಬಜೆಟ್ ಕೈಗಾರಿಕೋದ್ಯಮಗಳ ಪ್ರಗತಿಗೆ ಪೂರಕವಾಗಿದೆ ಹಾಗೂ ಹೊಸ ಕೈಗಾರಿಕೋದ್ಯಮಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಧನಾತ್ಮಕವಾಗಿದೆ ಎಂದು ಕೊಪ್ಪಳ ಜಿಲ್ಲೆಯ ವಾಣಿಜ್ಯ ಉದ್ಯಮಿ ಶ್ರೀನಿವಾಸ ಗುಪ್ತ ಆಕಾಶವಾಣಿಯೊಂದಿಗೆ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ–ಶ್ರೀನಿವಾಸ ಗುಪ್ತ (33 ಸೆಕೆಂದುಗಳು)

ಕೇಂದ್ರ ಬಜೆಟ್ ಕೃಷಿ, ಉದ್ಯಮಶೀಲತೆಯೊಂದಿಗೆ ಸಾಮಾಜಿಕ ನ್ಯಾಯ, ಮಹಿಳಾ ಸಬಲೀಕರಣಕ್ಕೆ ಒತ್ತು ನೀಡುವ ಬಜೆಟ್ ಆಗಿದೆ ಎಂದು, ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ, ಅರ್ಥಶಾಸ್ತ್ರ ವಿಭಾಗದ ಸಂಶೋಧನಾ ವಿದ್ಯಾರ್ಥಿನಿ, ಶ್ರೇಯಾ ಸುಪ್ಪನ್ನವರ್ ತಮ ಅಭಿಪ್ರಾಯವ್ಯಕ್ತಪಡಿಸಿದ್ದಾರೆ.

ಧ್ವನಿ–ಶ್ರೇಯಾ ಸುಪ್ಪನ್ನವರ (45 ಸೆಕೆಂದುಗಳು)

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಶ್ರೀ ಚಾಮುಂಡೇಶ್ವರಿ ದೇವಿಯ ಕೃಪೆಯಿಂದ ಉತ್ತಮ ಮಳೆಯಾಗಿ ಕೆರೆ ಕಟ್ಟೆ ತುಂಬಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಸ ವ್ಯಕ್ತಪಡಿಸಿದ್ದಾರೆ. ರಾಮನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಚಾಮುಂಡಿ ಹಬ್ಬ –2024 ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಮನಗರ ಕ್ಷೇತ್ರದ ಶಾಸಕರ ಮನವಿಯಂತೆ ರಾಮನಗರ ಜಿಲ್ಲೆ ಸೇರಿದಂತೆ 7 ಕೋಟಿ ಜನರ ಪರವಾಗಿ ಸರ್ಕಾರ ಕಾರ್ಯ ನಿರ್ವಹಿಸುತ್ತಿದೆ ಎಂದರು. ಶಾಸಕ ಎಚ್.ಎ.ಇಕ್ಬಾಲ್ ಹುಸೇನ್, ಕ್ಷೇತ್ರದ ಅಭಿವೃದ್ಧಿಗೆ ವಸತಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಹೆಚ್ಚಿನ ನೆರವು ನೀಡಬೇಕು ಎಂದು ಮುಖ್ಯಮಂತ್ರಿ ಅವರಲ್ಲಿ ಮನವಿ ಮಾಡಿದರು. ಕಾರ್ಯಕ್ರಮಕ್ಕೂ ಮುನ್ನ ಶಕ್ತಿದೇವತೆ ಶ್ರೀ ಚಾಮುಂಡೇಶ್ವರಿ ಅಮ್ಮನವರ ದೇವಾಲಯಕ್ಕೆ ಭೇಟಿ ನೀಡಿ ಮುಖ್ಯಮಂತ್ರಿಯವರು ವಿಶೇಷ ಪೂಜೆ ಸಲ್ಲಿಸಿದರು.

*******

ರೈತರ ಅಭಿವೃದ್ಧಿಗೆ ಸರ್ಕಾರ ಬದ್ಧ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಖಾತೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ವಿಧಾನ ಪರಿಷತ್ತಿನ ಕಲಾಪದ ವೇಳೆ, ವಿಧಾನ ಪರಿಷತ್ತಿನ ಸದಸ್ಯರಾದ ಎನ್. ರವಿ ಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯದಿಂದ 81.44 ಕೋಟಿ ರೂಪಾಯಿ ಮೌಲ್ಯದ ಹೂವುಗಳನ್ನು ರಫ್ತು ಮಾಡಲಾಗುತ್ತಿದೆ. ಹೂವುಗಳ ರಫ್ತು ಪ್ರಮಾಣ ಹೆಚ್ಚಿಸಲು ತೆರೆದ ಪ್ರದೇಶದಲ್ಲಿ ವಿವಿಧ ಜಾತಿಯ ಹೂವಿನ ಬೆಳೆಗಳನ್ನು ಬೆಳೆಯಲು ಗರಿಷ್ಟ 1 ಹೆಕ್ಟೇರ್ ಪ್ರದೇಶದವರೆಗೆ ಸಹಾಯಧನವನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

*******

ಅನಧಿಕೃತ ಬಡಾವಣೆಗಳನ್ನು ತೆರವುಗೊಳಿಸಲು ಅಗತ್ಯ ಕ್ರಮ ವಹಿಸುವುದಾಗಿ ಸಚಿವ ಬಿ.ಎಸ್. ಸುರೇಶ್ ತಿಳಿಸಿದ್ದಾರೆ. ವಿಧಾನ ಪರಿಷತ್ತಿನ ಕಲಾಪದ ವೇಳೆ, ವಿಧಾನ ಪರಿಷತ್ತಿನ ಸದಸ್ಯರಾದ ಪ್ರದೀಪ್ ಶೆಟ್ಟರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, 2023–24ನೇ ಸಾಲಿನಲ್ಲಿ ಹುಬ್ಬಳ್ಳಿ – ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದಿಂದ 122 ಖಾಸಗಿ ಬಡಾವಣೆಗಳನ್ನು ನಿರ್ಮಿಸಲು ಅನುಮೋದನೆ ನೀಡಲಾಗಿದೆ. ಅನಧಿಕೃತ ಬಡಾವಣೆಗಳ ಬಗ್ಗೆ ಪ್ರಾಧಿಕಾರದ ಗಮನಕ್ಕೆ ಬಂದ ನಂತರ ಆಯಾ ಜಮೀನಿನ ಮಾಲೀಕರುಗಳಿಗೆ ತಹಶೀಲ್ದಾರ್ ಮೂಲಕ ನೋಟಿಸು ಜಾರಿ ಮಾಡಲಾಗಿದೆ. ಎಂದು ತಿಳಿಸಿದರು.

*******

ರಾಜ್ಯದ ಹಲವೆಡೆ ಮಳೆ ನಿರಂತರವಾಗಿ ಸುರಿಯುತ್ತಿರುವ ಹಿನ್ನೆಲೆ, ಜನ ಜೀವನ ಅಸ್ತವ್ಯಸ್ಥಗೊಂಡಿದೆ. ಬೆಳಗಾವಿ ಜಿಲ್ಲೆಯಲ್ಲಿ ವ್ಯಾಪಕ ಮಳೆ ಮುಂದುವರೆದಿರುವ ಕಾರಣ ಬೆಳಗಾವಿ, ಖಾನಾಪುರ, ಬೈಲಹೊಂಗಲ ಮತ್ತು ಕಿತ್ತೂರು ತಾಲ್ಲೂಕಿನ ಅಂಗನವಾಡಿ, ಎಲ್ಲ ಸರಕಾರಿ, ಅನುದಾನಿತ, ಅನುದಾನರಹಿತ ಪ್ರಾಥಮಿಕ–ಪ್ರೌಢಶಾಲೆಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಆದೇಶ ಹೊರಡಿಸಿದ್ದಾರೆ. ಅದೇ ರೀತಿ ಬೆಳಗಾವಿ ಮತ್ತು ಖಾನಾಪುರ ತಾಲ್ಲೂಕಿನ ಪದವಿ ಪೂರ್ವ ಕಾಲೇಜುಗಳಿಗೂ ರಜೆ ಘೋಷಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉತ್ತರಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಶಿರೂರ ಗುಡ್ಡ ಕುಸಿತ ದುರ್ಘಟನೆಗೆ ಸಂಬಂಧಿಸಿದಂತೆ ನಿನ್ನೆ ಗಂಗಾವಳಿ ನದಿಯಲ್ಲಿ ಮಹಿಳೆಯ ಶವ ದೊರಕಿದ್ದು, ಇದರಿಂದ ಮೃತರ ಸಂಖ್ಯೆ 8 ಕ್ಕೆ ಏರಿಕೆಯಾಗಿದೆ. ಮೃತಳನ್ನು ಸಣ್ಣಿ ಹನುಮಂತ ಗೌಡ ಎಂದು ಗುರುತಿಸಲಾಗಿದೆ. ತುಂಗಭದ್ರ ಜಲಾನಯನ ಪ್ರದೇಶದಲ್ಲಿ ಅತ್ಯಧಿಕ ಮಳೆ ಆಗುತ್ತಿರುವ ಹಿನ್ನೆಲೆ, ವಿಜಯನಗರ ಜಿಲ್ಲೆಯ ಹೊಸಪೇಟೆಯ ತುಂಗಭದ್ರಾ  ಅಣೆಕಟ್ಟೆಗೆ 1 ಲಕ್ಷ ಕ್ಯೂಸೆಕ್ ಕ್ಕೂ ಅಧಿಕ ನೀರು ಹರಿದು ಬರುತ್ತಿದ್ದು, ಜಲಾಶಯದ ಗೇಟ್‌ಗಳಿಂದ ನದಿಗೆ  ನೀರನ್ನು ಹರಿ ಬಿಡಲಾಗಿದೆ. ನದಿ ಪಾತ್ರದ ಜನರು ಎಚ್ಚರಿಕೆ ವಹಿಸುವಂತೆ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಮನವಿ ಮಾಡಿದ್ದಾರೆ. ತುಂಗಭದ್ರಾ ನದಿಯ ನೀರಿನ ಹರಿವು ಅಧಿಕವಾಗುತಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಹಮ್ಮಿಗಿ ಬ್ಯಾರೇಜ್ ಹಿನ್ನೀರು ಪ್ರದೇಶಗಳಿಗೆ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಭೇಟಿ ನೀಡಿ ಪರಿಶೀಲಿಸಿದರು. ಹಮ್ಮಿಗಿ, ವಿಠಲಾಪುರ, ಗುಮ್ಮಗೋಳ, ಬೀದರಹಳ್ಳಿ ಗ್ರಾಮಗಳಿಗೆ ಭೇಟಿ ನೀಡಿ, ನದಿ ಪಾತ್ರದ ಸಾರ್ವಜನಿಕರು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಗೊಳ್ಳಬೇಕು. ಯಾವುದೇ ರೀತಿಯ ಜನ ಜಾನುವಾರು ಜೀವ ಹಾನಿಯಾಗದಂತೆ ನಿಗಾವಹಿಸಿ, ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಸ್ಥಳೀಯ ಅಧಿಕಾರಿಗಳಿಗೆ ಸೂಚಿಸಿದರು. ಚಿಕ್ಕಮಗಳೂರು ಜಿಲ್ಲೆಯಲ್ಲಿ ಸಾಧಾರಣ ಮಳೆ ಮುಂದುವರೆದಿದ್ದು ವೇಗವಾಗಿ ಗಾಳಿ ಬೀಸುತ್ತಿದೆ. ಲಕ್ಕವಳ್ಳಿ ಭದ್ರಾ ಜಲಾಶಯಕ್ಕೆ ಅಪಾರ ಪ್ರಮಾಣದ ನೀರು ಹರಿದು ಬರುತ್ತಿದ್ದು ಭರ್ತಿಯಾಗಲು 18 ಅಡಿಗಳಷ್ಟೇ ಬಾಕಿ ಇದೆ.

*******

ಪ್ಯಾರಿಸ್‌ನಲ್ಲಿ ನಡೆಯಲಿರುವ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ, ರಾಜ್ಯದ 9 ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಮಹಿಳೆಯರ ಬ್ಯಾಡ್ಮಿಂಟನ್ ಡಬಲ್ಸ್ ವಿಭಾಗದಲ್ಲಿ ಅಶ್ವಿನಿ ಪೊನ್ನಪ್ಪ, ಮಹಿಳೆಯರ ಗಾಲ್ಫ್ ವಿಭಾಗದಲ್ಲಿ ಅದಿತಿ ಅಶೋಕ್, ಮಹಿಳೆಯರ ಫ್ರೀ ಸ್ಟೈಲ್ ಈಜು ವಿಭಾಗದಲ್ಲಿ ಕುಮಾರಿ ಧನಿಧಿ ದಿಸಿಂಗೂ, ಮಿಶ್ರ ರಿಲೇ ವಿಭಾಗದಲ್ಲಿ ಎಂ.ಆರ್.ಪೂವಮ್ಮ, ಟೇಬಲ್ ಟೆನಿಸ್ ವಿಭಾಗದಲ್ಲಿ ಅರ್ಚನಾ ಕಾಮತ್, ಪುರುಷರ 100 ಮೀಟರ್ ಫ್ರೀ ಸ್ಟೈಲ್ ಈಜು ವಿಭಾಗದಲ್ಲಿ ಶ್ರೀಹರಿ ನಟರಾಜ್, ಪುರುಷರ ಟೆನಿಸ್ ಡಬಲ್ಸ್ ವಿಭಾಗದಲ್ಲಿ ರೋಹನ್ ಬೋಪಣ್ಣ, ಪುರುಷರ ಬಾಕ್ಸಿಂಗ್‌ನ 71 ಕಿಲೋ ವಿಭಾಗದಲ್ಲಿ ನಿಶಾಂತ್ ದೇವ್, ರಿಲೇ ವಿಭಾಗದಲ್ಲಿ ಮಿಜೋ ಚಾಕೋ ದೇಶವನ್ನು ಪ್ರತಿನಿಧಿಸಲಿದ್ದಾರೆ. ರಾಜ್ಯ ಸರ್ಕಾರವು ಎಲ್ಲ 9 ಕ್ರೀಡಾಳುಗಳಿಗೆ ತಲಾ 5 ಲಕ್ಷ ರೂಪಾಯಿ ಸಹಾಯಧನ ಘೋಷಿಸಿದೆ. ಒಲಿಂಪಿಕ್ಸ್‌ನಲ್ಲಿ ಭಾಗವಹಿಸುತ್ತಿರುವ ರಾಜ್ಯದ ಕ್ರೀಡಾಪಟುಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶುಭಾಶಯ ಕೋರಿದ್ದಾರೆ.

*******